# ಜಿಲ್ಲಾ ಪಂಚಾಯತ ರಾಯಚೂರು.

ಸಂ:ಜಿಪಂರಾ:ಗ್ರಾನೀಸ:ಆಂಮ:2007-08 ದಿನಾಂಕ: 20-01-2008

## ಆದೇಶ.

**ವಿಷಯ** : 2006-07 ನೇ ಸಾಲಿನ ARWSP ಬದಲಾವಣೆಗೊಂಡ ಗ್ರಾಮೀಣ ಕುಡಿಯುವ ನೀರಿನ ಕಾಮಗಾರಿಗಳ ಅಂದಾಜು ಪತ್ರಿಕೆಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

**ಉಲ್ಲೇಖ**: ಕಾರ್ಯ ಪಾಲಕ ಅಭಿಯಂತರು, ಪಂಚಾಯತ ರಾಜ್ ಇಂಜಿನೀಯರಿಂಗ ವಿಭಾಗ ರಾಯಚೂರು ಅವರ ಪತ್ರ ಸಂ:ಕಾನಿಅ/ಪಂರಾಇಂ/ರಾವಿ/ಕಿ.ಇಂ.-2/2007-08/ ದಿನಾಂಕ:4-1-2008.

ಉಲ್ಲೇಖಿತ ಪತ್ರದ ಮೂಲಕ ಕಾರ್ಯಪಾಲಕ ಅಭಿಯಂತರು, ಜಿಲ್ಲಾ ಪಂಚಾಯತ ರಾಜ್ ಇಂಜಿನೀಯರಿಂಗ ವಿಭಾಗ ರಾಯಚೂರು ಅವರು 2007-08 ನೇ ಸಾಲಿನ ARWSP ಕ್ರಿಯಾ ಯೋಜನೆಯಲ್ಲಿ ಮುಂದುವರೆದ ಕಾಮಗಾರಿಗಳಾಗಿ ಮಂಜೂರಾಗಿರುವ ಕೆಳಕಾಣಿಸಿದ ಕಾಮಗಾರಿಗಳ ಅಂದಾಜು ಪತ್ರಿಕೆಗಳನ್ನು ಆಡಳಿತಾತ್ಮಕ ಮಂಜೂರಾತಿ ಕೋರಿ ಸಲ್ಲಿಸಿರುತ್ತಾರೆ.

ಕಾರ್ಯಪಾಲಕ ಅಭಿಯಂತರು, ಪಂಚಾಯತ ರಾಜ್ ಇಂಜಿನೀಯರಿಂಗ ವಿಭಾಗ ರಾಯಚೂರು ಅವರು ಸಲ್ಲಿಸಿದ ಅಂದಾಜು ಪತ್ರಕೆಗಳನ್ನು ಪರಿಶೀಲಿಸಲಾಗಿ ಈ ಕಾಮಗಾರಿಗಾಗಿ (ಹುಡಾ ಗ್ರಾಮದ ಪೈಪ ಲೈನ ಅಳವಡಿಕೆ) ಕಛೇರಿ ಆದೇಶ ಸಂ:ಜಿಪರಾ /ARWSP /MNP /DDP /2007-08 ದಿನಾಂಕ: 21-11-2007 ರಲ್ಲಿ ರೂ. 10.00 ಲಕ್ಷಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ. ಪ್ರಸ್ತುತ ಕಾರ್ಯಪಾಲಕ ಅಭಿಯಂತರು, ಪಂಚಾಯತ ರಾಜ್ ಇಂಜಿನೀಯರಿಂಗ ವಿಭಾಗ ರಾಯಚೂರು ಅವರು ತಿಳಿಸಿದಂತೆ ಸದರಿ ಕಾಮಗಾರಿಗೆ ಬದಲಾಗಿ ದಿನಾಂಕ:13-3-2007 ರಂದು ಜರುಗಿದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯು ಕೆಳಕಾಣಿಸಿದಂತೆ ಕಾಮಗಾರಿಗಳನ್ನು ಬದಲಾವಣೆಗೆ ಅನುಮೋದನೆಯನ್ನು ನೀಡಿರುತ್ತದೆ. ಇದನ್ನು ಪರಿಗಣಿಸಿ ದಿನಾಂಕ: 21-11-2007ರ ಆಡಳಿತಾತ್ಮಕ ಮಂಜೂರಾತಿಯನ್ನು ರದ್ದು ಪಡಿಸಿ, ಕೆಳಕಾಣಿಸಿದ ಷರತ್ತಿಗೊಳಪಟ್ಟು ಬದಲಾಯಿಸಿದ ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

| **ಈಗಾಗಲೇ ಅನುಮೋದನೆಗೊಂಡ ಕಾಮಗಾರಿ** | | | **ಬದಲಾವಣೆ ಮಾಡಿದ ಕಾಮಗಾರಿಗಳ ವಿವರ** | | |
|---|---|---|---|---|---|
| **ಕ್ರ. ಸಂ** | **ಕಾಮಗಾರಿ ವಿವಿರ** | **ಅಂದಾಜು ಮೊತ್ತ ರೂ** | ಕ್ರ. ಸಂ | ಕಾಮಗಾರಿ ವಿವಿರ | **ಅಂದಾಜು ಮೊತ್ತ ರೂ.** |
| 1 | ಹುಡಾ ಗ್ರಾಮದವರೆಗೆ ಪೈಪ ಲೈನ ಅಳವಡಿಕೆ | 10.00 ಲಕ್ಷ | 1 | ಹುಡಾ ಗ್ರಾಮದವರೆಗೆ ಪೈಪ ಲೈನ ಅಳವಡಿಕೆ | 5.00 ಲಕ್ಷ |
| | | | 2 | ಚಿಂಚೇರಿ ಗ್ರಾಮಕ್ಕೆ ಕಿ.ನೀ.ಸ.ಯೋಜನೆ. | 5.00 ಲಕ್ಷ |
| **ಒಟ್ಟು** | | 10.00 ಲಕ್ಷ | **ಒಟ್ಟು** | | 10.00 ಲಕ್ಷ |

### ಷರತ್ತುಗಳು:

1. ಈ ಯೋಜನೆಯಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳನ್ನು ಬೇರೆ ಯಾವುದೇ ಯೋಜನೆಯಲ್ಲಿ ತೆಗೆದುಕೊಂಡಿಲ್ಲವೆಂದು ದೃಡೀಕರಿಸುವುದು.
2. ಈ ಎಲ್ಲಾ ಕಾಮಗಾರಿಗಳನ್ನು 2007-08 ನೇ ಆರ್ಥಿಕ ವರ್ಷದಲ್ಲಿ ಪೂರ್ಣಗೊಳಿಸಬೇಕು. ಯಾವುದೇ ಕಾರಣಕ್ಕೂ ಈ ಕಾಮಗಾರಿಗಳು ಮುಂದಿನ ವರ್ಷಕ್ಕೆ ಮುಂದುವರೆದ ಕಾಮಗಾರಿಗಳಾಗದಂತೆ ನೋಡಿಕೊಳ್ಳತಕ್ಕದ್ದು.

3. ಜಿಲ್ಲಾ ಪಂಚಾಯತ ಕಛೇರಿಯಲ್ಲಿ ಕಾಮಗಾರಿಗಳ ಗಣಕೀಕೃತ ಮಾಹಿತಿಯನ್ನು update ಮಾಡಲು ಕಾಮಗಾರಿಯನ್ನು ಪ್ರಾರಂಭಿಸಿದ ದಿನಾಂಕ ಹಾಗೂ ಪೂರ್ಣಗೊಳಿಸಿದ ದಿನಾಂಕ ಅಥವಾ ಪೂರ್ಣಗೊಳಿಸಬಹುದಾದ ದಿನಾಂಕ ಮತ್ತು ಇತರೆ ಮಾಹಿತಿಯನ್ನು ಈ ಕಾರ್ಯಾಲಯದಿಂದ ನೀಡಿದ ನಮೂನೆಯಲ್ಲಿ ಒದಗಿಸಲು ಸೂಚಿಸಿದೆ. ಹಾಗೂ ಹಿಂದಿನ ಮಾಹೆಯಲ್ಲಿನ ವೆಚ್ಚದ ವಿವಿರಗಳನ್ನು ಪ್ರತಿ ತಿಂಗಳು 5 ನೇ ದಿನಾಂಕದೊಳಗೆ ಈ ಕಛೇರಿಗೆ ಸಲ್ಲಿಸುವುದು.
4. ಕಾಮಗಾರಿಯ ಅನುಷ್ಠಾನ ಮತ್ತು ಆರ್ಥಿಕ ಮತ್ತು ಭೌತಿಕ ಪ್ರಗತಿಯ ಮಾಹಿತಿಯನ್ನು ಸಂಬಂದಿಸಿದ ಗ್ರಾಮ ಪಂಚಾಯಿತಿಗೆ ಒದಗಿಸುವುದು.
5. ಕಾಮಗಾರಿಯನ್ನು ಲಬ್ಯ ಅನುದಾನ ಪರಿಗಣಿಸಿ ಅನುಷ್ಠಾನಗೊಳಿಸುವುದು ಹಾಗೂ ವೆಚ್ಚವನ್ನು ಸಂಬಂದಿಸಿದ ಯೋಜನೆಯ ಲೆಕ್ಕ ಶೀರ್ಷಿಕೆಯಡಿ ಭರಿಸುವುದು.

(ಮು.ಕಾ.ನಿ.ಆಧಿಕಾರಿಗಳ
ಕ.ಟಿ.ಅನುಮೋದನೆ ಮೇರೆಗೆ.)

ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಪರವಾಗಿ
ಜಿಲ್ಲಾ ಪಂಚಾಯತ ರಾಯಚೂರು.

**ಪ್ರತಿಯನ್ನು ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ ಇವರಿಗೆ ಕಳುಹಿಸಿದೆ.**

1. ಮಾನ್ಯ ಅದ್ಯಕ್ಷರು/ಉಪಾದ್ಯಕ್ಷರು ಜಿಲ್ಲಾ ಪಂಚಾಯತ ರಾಯಚೂರು ರವರ ಆಪ್ತ ಶಾಖೆಗೆ.
2. ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ರಾಯಚೂರು ರವರ ಆಪ್ತ ಶಾಖೆಗೆ.
3. ಕಾರ್ಯ ಪಾಲಕ ಅಭಿಯಂತರು, ಪಂಚಾಯತ ರಾಜ್ ಇಂಜಿನೀಯರಿಂಗ ವಿಭಾಗ ರಾಯಚೂರು ಇವರಿಗೆ ಆಡಳಿತ ಮಂಜೂರಾತಿ ನೀಡಿದ ಅಂದಾಜು ಪಟ್ಟಿಗಳನ್ನು ಲಗತ್ತಿಸಿ ಕಳುಹಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರು ಪಂಚಾಯತ ರಾಜ್ ಇಂಜಿನೀಯರಿಂಗ ಉಪವಿಭಾಗ ಸಿಂಧನೂರು
5. ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯತ ಸಿಂಧನೂರು.
6. **ಅದ್ಯಕ್ಷರು / ಕಾರ್ಯದರ್ಶಿಗಳು** ಹುಡಾ ಗ್ರಾಮ ಪಂಚಾಯತ, ಸಿಂಧನೂರು ತಾಲ್ಲೂಕು ಇವರಿಗೆ ರವಾನಿಸುತ್ತಾ ಕಾಮಗಾರಿಯ ಆಡಳಿತಾತ್ಮಕ ಮಂಜೂರಾತಿಯ ಬಗ್ಗೆ ಗ್ರಾಮ ಪಂಚಾಯತ ಮಾಸಿಕ ಸಭೆಯಲ್ಲಿ ಓದಿ ದೃಢೀಕರಿಸಲು ಸೂಚಿಸಿದೆ.
7. ಜಿಲ್ಲಾ ಪಂಚಾಯತ ರಾಯಚೂರು ಸೂಚನಾ ಫಲಕಕ್ಕೆ.
8. ಕಛೇರಿ ಪ್ರತಿ.